# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ | : | **03 (172)** |
| ಸದಸ್ಯರ ಹೆಸರು | : | ಶ್ರೀ. ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 07.12.2020 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | 2019-20ನೇ ಸಾಲಿನಲ್ಲಿ ಪ್ರೌಢ ಶಿಕ್ಷಣ ಮಂಡಳಿಯು ನಡೆಸಿದ ಪರೀಕ್ಷೆಯ ಮೌಲ್ಯ ಮಾಪನದಲ್ಲಿ ಲೋಪದೋಷ ಕಂಡು ಬಂದಿದ್ದು ಇದರಿಂದ ಹಲವಾರು ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | 2019-20ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಮಾರ್ಚ್/ಏಪ್ರಿಲ್ ಮಾಹೆಯಿಂದ ಮುಂದೂಡಲ್ಪಟ್ಟು ದಿನಾಂಕ: 25-06-2020 ರಿಂದ 04-07-2020 ರವರೆಗೆ ರಾಜ್ಯಾದ್ಯಂತ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಓ.ಪಿ ಆಧರಿಸಿ ಮುನ್ನೆಚ್ಚರಿಕೆಗಳೊಂದಿಗೆ ಯಶಸ್ವಿಯಾಗಿ ನಡೆಸಲಾಯಿತು.<br>ಕೋವಿಡ್-19ರ ಹಿನ್ನೆಲೆಯಲ್ಲಿ ಜಿಲ್ಲಾ ಮೌಲ್ಯಮಾಪನ ಕೇಂದ್ರಗಳಿಗೆ ಪ್ರಕಟಿಸಿದ್ದ ಎಸ್.ಓ.ಪಿ. ಅನ್ವಯ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡು ಎಸ್.ಎಸ್.ಎಲ್.ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ರಾಜ್ಯದ 34 ಶೈಕ್ಷಣಿಕ ಜಿಲ್ಲಾ ಕೇಂದ್ರಗಳಲ್ಲಿ ನಡೆಸಿ, ವಿದ್ಯಾರ್ಥಿಗಳಿಗೆ ಫಲಿತಾಂಶವನ್ನು ನೀಡಲಾಯಿತು.<br>ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸಿದ ಪರೀಕ್ಷೆಯ ಮೌಲ್ಯಮಾಪನದಲ್ಲಿ ಯಾವುದೇ ಲೋಪದೋಷಗಳಾಗದಂತೆ ಮೌಲ್ಯಮಾಪನವನ್ನು ನಡೆಸಲಾಗಿದೆ. ಆದಾಗ್ಯೂ 16971 ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಿರುತ್ತಾರೆ.<br>• ಮೇಲ್ಕಂಡ 16971 ಅರ್ಜಿಗಳಲ್ಲಿ 06 ಕ್ಕಿಂತ ಕಡಿಮೆ ಅಂಕ ವ್ಯತ್ಯಾಸವಾಗಿರುವ ಪ್ರಕರಣಗಳು **12055** ಸಂಖ್ಯೆಯಲ್ಲಿರುತ್ತದೆ. ಒಬ್ಬ ಮೌಲ್ಯಮಾಪಕರಿಗೂ ಮತ್ತೊಬ್ಬ ಮೌಲ್ಯಮಾಪಕರಿಗೂ ಆಲೋಚನೆಗಳು ವಿಭಿನ್ನವಾಗಿದ್ದು, 01-02 ಅಂಕಗಳನ್ನು ವಿದ್ಯಾರ್ಥಿಗಳ ಬರವಣಿಗೆಗನುಸಾರವಾಗಿ ಹೆಚ್ಚು ಅಥವಾ ಕಡಿಮೆ ನೀಡುವ ಸಾಧ್ಯತೆ ಇರುತ್ತದೆ. ಈ ರೀತಿಯ ವ್ಯತ್ಯಾಸಗಳನ್ನು ವಿದ್ಯಾರ್ಥಿಗಳ ಕೋರಿಕೆಯನ್ವಯ ಮರುಮೌಲ್ಯಮಾಪನದಲ್ಲಿ ಪರಿಶೀಲಿಸಿ ಸ್ವಲ್ಪವೂ ಲೋಪವಾಗದಂತೆ ಸರಿಪಡಿಸಲಾಗಿದೆ.<br>• 06 ಕ್ಕಿಂತ ಹೆಚ್ಚು ಅಂಕ ವ್ಯತ್ಯಾಸವಿರುವ ಪ್ರಕರಣಗಳ **3882** ಸಂಖ್ಯೆಯಲ್ಲಿರುತ್ತದೆ. ಈ ರೀತಿಯ ವ್ಯತ್ಯಾಸಗಳನ್ನು ಮರುಮೌಲ್ಯಮಾಪನದಲ್ಲಿ ಸಂಪೂರ್ಣ ಸರಿಪಡಿಸಲಾಗಿದೆ. ಮತ್ತು ಈ ರೀತಿ ಅಸಮರ್ಪಕ ಮೌಲ್ಯಮಾಪನ ಮಾಡಿರುವ ಮೌಲ್ಯಮಾಪಕರುಗಳಿಗೆ ದಂಡ ವಿಧಿಸಲು ಕ್ರಮವಹಿಸಲಾಗಿದೆ. ಮತ್ತು 06 ಕ್ಕಿಂತ ಹೆಚ್ಚು ಅಂಕ ವ್ಯತ್ಯಾಸವಾಗಿರುವ ವಿದ್ಯಾರ್ಥಿಗಳಿಗೆ ಪಾವತಿಸಿರುವ ಶುಲ್ಕವನ್ನು ಸಹ ಮರುಭರಣ ಮಾಡುವ ಕ್ರಮಕೈಗೊಳ್ಳಲಾಗಿದೆ. |

| | | |
|---|---|---|
| | | ಯಾವುದೇ ವ್ಯತ್ಯಾಸವಿಲ್ಲದಿದ್ದರೂ ಅರ್ಜಿ ಸಲ್ಲಿಸಿರುವ ಪ್ರಕರಣಗಳನ್ನು ಪರಿಶೀಲಿಸಿ ವಿಲೇ ಮಾಡಲಾಗಿದೆ. 1034 |

ಸಂಖ್ಯೆ: ಇಪಿ 209 ಎಸ್‌ಎಲ್‌ಬಿ 2020

S. S.

**(ಎಸ್. ಸುರೇಶ್ ಕುಮಾರ್)**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ

ಸಕಾಲ ಸಚಿವರು